ಕಾಲೇಜು ಕಟ್ಟಡ ರಿಪೇರಿ

91(79); ಶ್ರೀ ಪಾಟೀಲ್ ಬಿಆರ್. (ಆಳಂದ)

ಅ) ಆಳಂದ ನಗರದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಹೈಸ್ಕೂಲ್ ಕಟ್ಟಡ ಲೋಕೋಪಯೋಗಿ ಇಲಾಖೆಗೆ ಸೇರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಕಟ್ಟಡವನ್ನು ನಿರ್ಮಾಣ ಮಾಡಿ ಎಷ್ಟು ವರ್ಷಗಳಾಗಿವೆ;

ಇ) ಕಟ್ಟಡ ದುರಾವಸ್ಥೆಯಲ್ಲಿದ್ದು ರಿಪೇರಿ, ಸುಣ್ಣ ಬಣ್ಣವಿಲ್ಲದೆ, ಕಂಪೌಂಡವಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಸರ್ಕಾರ ಎಂದು ರಿಪೇರಿ ಕಾರ್ಯಕೈಗೊಳ್ಳುವುದು?

ಡಾ॥ ಹೆಚ್.ಸಿ. ಮಹದೇವಪ್ಪ (ಲೋಕೋಪಯೋಗಿ ಸಚಿವರು)

ಅ) ಆಳಂದ ನಗರದಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜು ಮತ್ತು ಹೈಸ್ಕೂಲ್ ಕಟ್ಟಡವನ್ನು ಲೋಕೋಪಯೋಗಿ ಇಲಾಖೆಯಿಂದ ನಿರ್ಮಾಣ ಮಾಡಲಾಗಿದ್ದು, ಸದರಿ ಕಟ್ಟಡವನ್ನು ಶಿಕ್ಷಣ ಇಲಾಖೆಗೆ ಹಸ್ತಾಂತರಿಸಲಾಗಿರುತ್ತದೆ.

ಆ) ಸದರಿ ಕಟ್ಟಡವನ್ನು 1964 ರಲ್ಲಿ ನಿರ್ಮಿಸಲಾಗಿದ್ದು, ಈಗಾಗಲೇ 50 ವರ್ಷಗಳಾಗಿರುತ್ತದೆ.

ಇ) ಬಂದಿದೆ

ಈ) ಸದರಿ ಕಟ್ಟಡ ರಿಪೇರಿ ಕಾಮಗಾರಿಗಾಗಿ ಸಂಬಂಧಪಟ್ಟ ಶಿಕ್ಷಣ ಇಲಾಖೆಗೆ ಅನುದಾನ ಒದಗಿಸಲು ಕೋರಿ ಪ್ರಸ್ತಾವನೆ ಸಲ್ಲಿಸಲಾಗುವುದು. ಅನುದಾನ ಸ್ವೀಕೃತಿಯಾದ ಕೂಡಲೇ ಕಾಮಗಾರಿ ಕೈಗೊಳ್ಳಲಾಗುವುದು.